ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

15

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ        ದಿನಾಂಕ : DATE : 30/12/20

# ಫೆಬ್ರುವರಿಗೆ ಎರಡನೇ ಅಲೆ?

ಪ್ರ.ವಾ. 30-12-20

'ದೇಶದಲ್ಲಿ ಫೆಬ್ರುವರಿ ವೇಳೆಗೆ ಕೊರೊನಾ ಸೋಂಕಿನ ಎರಡನೇ ಅಲೆ ಕಾಣಿಸಿಕೊಳ್ಳುವ ಸಾಧ್ಯತೆ ಇದೆ. ಇಂಗ್ಲೆಂಡ್ ಮತ್ತು ಅಮೆರಿಕ ಸೇರಿದಂತೆ ಹಲವು ರಾಷ್ಟ್ರಗಳಲ್ಲಿ ಸೋಂಕು ಪ್ರಕರಣಗಳು ಕಡಿಮೆಯಾದ 40ರಿಂದ 60 ದಿನಗಳ ನಂತರ ಎರಡನೇ ಅಲೆ ಕಾಣಿಸಿಕೊಂಡಿದೆ. ಅದರಂತೆ ನಮ್ಮ ದೇಶದಲ್ಲಿಯೂ ಎರಡನೇ ಅಲೆ ಆರಂಭವಾಗಬಹುದು ಎಂಬ ಬಗ್ಗೆ ವರದಿಗಳು ಬರುತ್ತಿವೆ' ಎಂದು ಕೋವಿಡ್ ತಾಂತ್ರಿಕ ಸಲಹಾ ಸಮಿತಿಯ ಸದಸ್ಯ, ಜಯದೇವ ಹೃದ್ರೋಗ ಸಂಶೋಧನಾ ಸಂಸ್ಥೆಯ ನಿರ್ದೇಶಕ ಡಾ. ಸಿ.ಎನ್. ಮಂಜುನಾಥ್ 'ಪ್ರಜಾವಾಣಿ'ಗೆ ತಿಳಿಸಿದರು.

'ಬ್ರಿಟನ್‌ನಲ್ಲಿ ಸೆಪ್ಟೆಂಬರ್‌ನಲ್ಲೇ ಈ ರೂಪಾಂತರ ಸೋಂಕು ಕಾಣಿಸಿಕೊಂಡಿದೆ. ಕೋವಿಡ್‌ಗೆ ನೀಡಬಹುದಾದ ಚಿಕಿತ್ಸೆ, ಲಸಿಕೆಯನ್ನು ಇವರಿಗೂ ನೀಡಲಾಗುತ್ತದೆ. ಬ್ರಿಟನ್‌ನಿಂದ ಬಂದವರನ್ನು ನಿಯಮಿತವಾಗಿ ಆರ್‌ಟಿ-ಪಿಸಿಆರ್ ಪರೀಕ್ಷೆಗೆ ಒಳಪಡಿಸಬೇಕು' ಎಂದು ಸಲಹೆ ನೀಡುತ್ತಾರೆ. 'ಕೊರೊನಾ ವೈರಸ್ ರೂಪಾಂತರಗೊಳ್ಳುತ್ತಲೇ ಇರುತ್ತದೆ. ಕೊರೊನಾ ಆಟ ಮುಗಿದಿಲ್ಲ. ಮೊದಲ 'ಇನ್ನಿಂಗ್ಸ್' ಮುಕ್ತಾಯದ ನಂತರ, ಎರಡನೇ 'ಇನ್ನಿಂಗ್ಸ್' ಪ್ರಾರಂಭವಾಗಲಿದೆ' ಎಂದರು.

**ಶಾಲೆ ಪುನರಾರಂಭ:** 'ಎಸ್ಸೆಸ್ಸೆಲ್ಸಿ, ದ್ವಿತೀಯ ಪಿಯು ತರಗತಿಗಳು ನಿಗದಿಯಂತೆ ಪುನರಾರಂಭವಾಗುತ್ತವೆ. 6ರಿಂದ 9ನೇ ತರಗತಿಯ ಮಕ್ಕಳಿಗೆ ವಿದ್ಯಾಗಮವೂ ನಡೆಯುತ್ತದೆ' ಎಂದು ಸಚಿವ ಡಾ.ಸುಧಾಕರ್ ಹೇಳಿದರು.